ಕರ್ನಾಟಕ ವಿಧಾನ ಪರಿಷತ್ತು

1) ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1032 (1246)

2) ಸದಸ್ಯರ ಹೆಸರು : ಶ್ರೀ ಎಸ್. ರವಿ
(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

3) ಉತ್ತರಿಸುವ ದಿನಾಂಕ : 15-03-2021

4) ಉತ್ತರಿಸುವವರು : ಅರಣ್ಯ, ಕನ್ನಡ ಮತ್ತು ಸಂಸ್ಕೃತಿ ಸಚಿವರು

ಕ್ರ ಸಂ	ಪ್ರಶ್ನೆ	ಉತ್ತರ
ಅ)	ಕೇಂದ್ರ ಸರ್ಕಾರದ ಅರಣ್ಯ, ಪರಿಸರ, ಜೀವಿಶಾಸ್ತ್ರ ಸಚಿವಾಲಯವು ರಾಮನಗರ ಜಿಲ್ಲಾ ವ್ಯಾಪ್ತಿಯಲ್ಲಿ ಕಾವೇರಿ ವನ್ಯಜೀವಿಗಳ ಪರಿಸರ ಸೂಕ್ಷ್ಮ ವಲಯ / ಬನ್ನೇರುಘಟ್ಟ ರಾಷ್ಟ್ರೀಯ ಉದ್ಯಾನವನ ಪರಿಸರ ಸೂಕ್ಷ್ಮ ವಲಯ / ಶ್ರೀರಾಮ ದೇವರಬೆಟ್ಟ ರಣಹದ್ದುಗಳ ಪರಿಸರ ಸೂಕ್ಷ್ಮ ವಲಯ ಎಂದು ಘೋಷಿಸಿ ಅಧಿಸೂಚನೆ ಹೊರಡಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಬಂದಿದೆ. ಭಾರತ ಸರ್ಕಾರವು ಗೆಜೆಟ್ ನೋಟಿಫಿಕೇಷನ್ ಸಂಖ್ಯೆ: SO2993(E), dated: 11.09.2017 ಮತ್ತು SO1036(E), dated: 11.03.2020ರಲ್ಲಿ ಕ್ರಮವಾಗಿ ಶ್ರೀ ರಾಮ ದೇವರಬೆಟ್ಟ ರಣಹದ್ದು ವನ್ಯಧಾಮ ಮತ್ತು ಬನ್ನೇರುಘಟ್ಟ ರಾಷ್ಟ್ರೀಯ ಉದ್ಯಾನವನದ ಸುತ್ತಲಿನ ಪ್ರದೇಶವನ್ನು ಪರಿಸರ ಸೂಕ್ಷ್ಮ ವಲಯವೆಂದು ಅಂತಿಮ ಅಧಿಸೂಚನೆಗೊಳಿಸಿರುತ್ತದೆ.
ಆ)	ಬಂದಿದ್ದಲ್ಲಿ, ಅಧಿಸೂಚನೆಯಂತೆ ಪರಿಸರ ಸೂಕ್ಷ್ಮ ವಲಯ ವ್ಯಾಪ್ತಿಯೊಳಗೆ ಬರುವ ಗ್ರಾಮಗಳು / ಪರಿಸರ ಸೂಕ್ಷ್ಮ ವಲಯ ವ್ಯಾಪ್ತಿಯಿಂದ 01 ಕಿಲೋಮೀಟರ್ ವ್ಯಾಪ್ತಿಯೊಳಗೆ ಬರುವ ಗ್ರಾಮಗಳಿಗೆ ಭೌತಿಕವಾಗಿ ಗಡಿ ಗುರುತಿಸಲಾಗಿದೆಯೇ;	ಪರಿಸರ ಸೂಕ್ಷ್ಮ ವಲಯ ವ್ಯಾಪ್ತಿಯೊಳಗೆ ಬರುವ ಗ್ರಾಮಗಳು / ಪರಿಸರ ಸೂಕ್ಷ್ಮ ವಲಯ ವ್ಯಾಪ್ತಿಯಿಂದ ಒಂದು ಕಿ.ಮೀ. ವ್ಯಾಪ್ತಿಯೊಳಗೆ ಬರುವ ಗ್ರಾಮಗಳಿಗೆ ಭೌತಿಕವಾಗಿ ಗಡಿ ಗುರುತಿಸುವ ಪ್ರಕ್ರಿಯೆ ಪ್ರಗತಿಯಲ್ಲಿರುತ್ತದೆ.
ಇ)	ಗುರುತಿಸಲಾಗಿದ್ದರೆ, ಸಂಬಂಧಪಟ್ಟ ಉಪ ಅರಣ್ಯ ಸಂರಕ್ಷಣಾಧಿಕಾರಿಗಳು ಸಾರ್ವಜನಿಕರಿಗೆ ಅವರ ಜಮೀನು ಪರಿಸರ ಸೂಕ್ಷ್ಮ ವಲಯ ವ್ಯಾಪ್ತಿಯೊಳಗೆ ಬರುತ್ತವೆಯೇ ಅಥವಾ ಇಲ್ಲವೇ ಎಂಬ ಬಗ್ಗೆ ನಿಖರವಾದ ಮಾಹಿತಿ ನೀಡುವಲ್ಲಿ ವಿಳಂಬ ಧೋರಣೆ ಅನುಸರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಪ್ರಸ್ತುತ ಸ್ವೀಕೃತವಾಗುವ ಜಮೀನು / ಯೋಜನಾ ಪ್ರದೇಶಗಳ ಪ್ರಸ್ತಾವನೆಗಳನ್ನು ಜಿ.ಪಿ.ಎಸ್. ತಂತ್ರಾಂಶದ ಸಹಾಯದಿಂದ ಪರಿಶೀಲಿಸಿ, ಪರಿಸರ ಸೂಕ್ಷ್ಮ ವಲಯ ವ್ಯಾಪ್ತಿಗೆ ಬರುವುದೇ ಅಥವಾ ಇಲ್ಲವೇ ಎಂಬ ಬಗ್ಗೆ ವರದಿ ನೀಡಲಾಗುತ್ತಿದೆ. ಮೇಲೆ ವಿವರಿಸಿದ ಕಾರಣಗಳಿಂದಾಗಿ ವಿಳಂಬದ ಪ್ರಶ್ನೆ ಉದ್ಭವಿಸುವುದಿಲ್ಲ.

ಈ)	ಪರಿಸರ ಸೂಕ್ಷ್ಮ ವಲಯ ವ್ಯಾಪ್ತಿಯೊಳಗೆ ಅಭಿವೃದ್ಧಿ ಚಟುವಟಿಕೆಗಳಿಗೆ ಅನುಮತಿ ನೀಡಲು ಪ್ರಾದೇಶಿಕ ಆಯುಕ್ತರ ಅಧ್ಯಕ್ಷತೆಯಲ್ಲಿ ನಿರ್ವಹಣಾ ಸಮಿತಿ ರಚಿಸಿದ್ದು, ಸಂಬಂಧಪಟ್ಟ ಉಪ ಅರಣ್ಯ ಸಂರಕ್ಷಣಾಧಿಕಾರಿಗಳು ಸಮಿತಿಯ ಸದಸ್ಯ ಕಾರ್ಯದರ್ಶಿಗಳಾಗಿದ್ದು, ಅದರಂತೆ ಈವರೆವಿಗೆ ಎಷ್ಟು ಸಮಿತಿ ಸಭೆ ನಡೆಸಲಾಗಿದೆ; ಎಷ್ಟು ಅಭಿವೃದ್ಧಿ ಚಟುವಟಿಕೆಗಳಿಗೆ ಅನುಮತಿ ನೀಡಲಾಗಿದೆ?	ಶ್ರೀ ರಾಮ ದೇವರಬೆಟ್ಟ ರಣಹದ್ದು ವನ್ಯಧಾಮದ ಪರಿಸರ ಸೂಕ್ಷ್ಮ ವಲಯ ವ್ಯಾಪ್ತಿಗೆ ಸಂಬಂಧಿಸಿದಂತೆ ಈವರೆವಿಗೆ ಒಟ್ಟು 3 ನಿರ್ವಹಣಾ ಸಮಿತಿ ಸಭೆಗಳು ಜರುಗಿರುತ್ತವೆ. ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರಕ್ಕೆ ಬೆಂಗಳೂರು – ಮೈಸೂರು ರಾಷ್ಟ್ರೀಯ ಹೆದ್ದಾರಿ-275 ಯನ್ನು ಅಭಿವೃದ್ಧಿ ಪಡಿಸಲು ಅನುಮತಿ ನೀಡಲಾಗಿದೆ. ಬನ್ನೇರುಘಟ್ಟ ರಾಷ್ಟ್ರೀಯ ಉದ್ಯಾನವನದ ಪರಿಸರ ಸೂಕ್ಷ್ಮ ವಲಯ ವ್ಯಾಪ್ತಿಗೆ ಸಂಬಂಧಿಸಿದಂತೆ ಈವರೆವಿಗೆ ಒಟ್ಟು 3 ನಿರ್ವಹಣಾ ಸಮಿತಿ ಸಭೆಗಳು ಜರುಗಿರುತ್ತವೆ. ಸದರಿ ಸಭೆಗಳಲ್ಲಿ ಒಟ್ಟು 35 ಅಭಿವೃದ್ಧಿ ಚಟುವಟಿಕೆಗಳ ಅರ್ಜಿಗಳನ್ನು ವಿಲೇವಾರಿ ಮಾಡಲಾಗಿದೆ.

ಸಂಖ್ಯೆ: ಅಪಜೀ 41 ಎಫ್‌ಡಬ್ಲ್ಯೂಎಲ್ 2021

(ಅರವಿಂದ ಲಿಂಬಾವಳಿ)
ಅರಣ್ಯ, ಕನ್ನಡ ಮತ್ತು ಸಂಸ್ಕೃತಿ ಸಚಿವರು